**National**
**Kannada**
**10.09.2025 7.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ವಾರಾಣಸಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಮಾರಿಷಸ್ ಪ್ರಧಾನಿ ನವೀನ್ ಚಂದ್ರ ರಾಮ್‌ಗೂಲಂ ಭೇಟಿ : ಅಭಿವೃದ್ಧಿ ಪಾಲುದಾರಿಕೆ ಕುರಿತು ಚರ್ಚೆ

2. ಪಶ್ಚಿಮ ಬಂಗಾಳದ ಭಾಗಲ್ಪುರ್, ದುಮ್ಕಾ, ರಾಂಪುರ್ಹತ್ ವಿಭಾಗದಲ್ಲಿ ೩ ಸಾವಿರದ ೧೬೯ ಕೋಟಿ ವೆಚ್ಚದ ದ್ವಿಪಥ ರೈಲು ಮಾರ್ಗ ನಿರ್ಮಾಣಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ

3. ಕಠ್ಮಂಡು ಕಣಿವೆಯ ನಿಯಂತ್ರಣ ಸಾಧಿಸಿದ ನೇಪಾಳ ಸೇನೆ : ಜನಜೀವನ ಸಹಜ ಸ್ಥಿತಿಗೆ

4. ನಾಳೆ ವಿಧಾನಸೌಧದಲ್ಲಿ ಕಾಮನ್‌ವೆಲ್ತ್ ಸಂಸದೀಯ ಸಂಘದ ಸಮ್ಮೇಳನ ಉದ್ಘಾಟಿಸಲಿರುವ ಲೋಕಸಭಾ ಅಧ್ಯಕ್ಷ ಓಂ ಬಿರ್ಲಾ

5. ಭಾರತ-ಚೀನಾ ಮೇಲೆ ಶೇಕಡ ೧೦೦ರಷ್ಟು ಸುಂಕ ವಿಧಿಸುವಂತೆ ಐರೋಪ್ಯ ಒಕ್ಕೂಟಕ್ಕೆ ಅಮೆರಿಕ ಮನವಿ

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಉತ್ತರ ಪ್ರದೇಶ ಮತ್ತು ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಈ ಭೇಟಿಯ ಸಮಯದಲ್ಲಿ, ಅವರು, ವಾರಣಾಸಿಯಲ್ಲಿ ಮಾರಿಷಸ್ ಪ್ರಧಾನಿ ಡಾ. ನವೀನ್‌ಚಂದ್ರ ರಾಮಗೂಲಂ ಅವರನ್ನು ಭೇಟಿಯಾಗಲಿದ್ದಾರೆ. ಉಭಯ ನಾಯಕರು ಅಭಿವೃದ್ಧಿ ಪಾಲುದಾರಿಕೆ ಮತ್ತು ಸಾಮರ್ಥ್ಯ ವೃದ್ಧಿಯ ಮೇಲೆ ನಿರ್ದಿಷ್ಟವಾಗಿ ಗಮನಹರಿಸುವ ಮೂಲಕ, ಸಹಕಾರದ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಆರೋಗ್ಯ, ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ, ಇಂಧನ, ಮೂಲಸೌಕರ್ಯ, ನವೀಕರಿಸಬಹುದಾದ ಇಂಧನ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಮತ್ತು ನೀಲಿ ಆರ್ಥಿಕತೆಯಂತಹ ಹೊಸ ಕ್ಷೇತ್ರಗಳಲ್ಲಿ ಸಹಯೋಗವನ್ನು ವಿಸ್ತರಿಸುವ ಅವಕಾಶಗಳ ಬಗ್ಗೆಯೂ ಸಹ ಅವರು ಚರ್ಚಿಸಲಿದ್ದಾರೆ. ಬಳಿಕ ಪ್ರಧಾನಿ, ಡೆಹ್ರಾಡೂನ್‌ಗೆ ಪ್ರಯಾಣಿಸಲಿದ್ದಾರೆ ಮತ್ತು ಉತ್ತರಾಖಂಡದ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆಯನ್ನು ಕೈಗೊಂಡು, ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿಯು ಬಿಹಾರ, ಜಾರ್ಖಂಡ್ ಮತ್ತು ಪಶ್ಚಿಮ ಬಂಗಾಳದಲ್ಲಿ ಭಾಗಲ್ಪುರ್ - ದುಮ್ಕಾ - ರಾಂಪುರ್ಹತ್ ಏಕ ರೈಲು ಮಾರ್ಗ ವಿಭಾಗದಲ್ಲಿ ಸುಮಾರು ೩ ಸಾವಿರದ ೧೬೯ ಕೋಟಿ ರೂಪಾಯಿ ವೆಚ್ಚದ ೧೭೭ ಕಿಲೋಮೀಟರ್ ಉದ್ದದ ದ್ವಿಪಥ ರೈಲು ಮಾರ್ಗ ನಿರ್ಮಾಣಕ್ಕೆ ಅನುಮೋದನೆ ನೀಡಿದೆ. ಬಿಹಾರದ ಬಕ್ಸಾರ್-ಭಾಗಲ್ಪುರ್ ಹೈ-ಸ್ಪೀಡ್ ಕಾರಿಡಾರ್‌ನ ೪-ಲೇನ್‌ಗಳ ಹಸಿರು ಕ್ಷೇತ್ರ ಪ್ರವೇಶ-ನಿಯಂತ್ರಿತ ಮೊಕಾಮಾ-ಮುಂಗರ್ ವಿಭಾಗದ ನಿರ್ಮಾಣಕ್ಕೂ ಸಂಪುಟ ಅನುಮೋದನೆ ನೀಡಿದೆ. ಇದು ೮೨ ಕಿಲೋಮೀಟರ್‌ಗಳಿಗಿಂತ ಹೆಚ್ಚು ಒಟ್ಟು ಯೋಜನಾ ಉದ್ದ ಮತ್ತು ೪ ಸಾವಿರದ ೪೪೭ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಒಟ್ಟು ಬಂಡವಾಳ ವೆಚ್ಚವನ್ನು ಹೊಂದಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ತೆಗೆದುಕೊಳ್ಳಲಾದ ಕ್ಯಾಬಿನೆಟ್ ಸಮಿತಿಯ ನಿರ್ಧಾರದ ಕುರಿತು ಇಂದು ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ವರ್ಧಿತ ಮಾರ್ಗ ಸಾಮರ್ಥ್ಯವು ಚಲನಶೀಲತೆಯನ್ನು ಸುಧಾರಿಸುತ್ತದೆ. ಭಾರತೀಯ ರೈಲ್ವೆಗೆ ವರ್ಧಿತ ದಕ್ಷತೆ ಮತ್ತು ಸೇವಾ ವಿಶ್ವಾಸಾರ್ಹತೆಯನ್ನು ಒದಗಿಸುತ್ತದೆ ಎಂದು ಹೇಳಿದರು. ಬಹು-ಟ್ರ್ಯಾಕಿಂಗ್ ಪ್ರಸ್ತಾವನೆಯು ಕಾರ್ಯಾಚರಣೆಯನ್ನು ಸುಗಮಗೊಳಿಸುತ್ತದೆ ಮತ್ತು ದಟ್ಟಣೆಯನ್ನು ಕಡಿಮೆ ಮಾಡುತ್ತದೆ. ಭಾರತೀಯ ರೈಲ್ವೆಯಾದ್ಯಂತ ಅತ್ಯಂತ ಜನನಿಬಿಡ ವಿಭಾಗಗಳಲ್ಲಿ ಹೆಚ್ಚು ಅಗತ್ಯವಿರುವ ಮೂಲಸೌಕರ್ಯ ಅಭಿವೃದ್ಧಿಯನ್ನು ಒದಗಿಸುತ್ತದೆ ಎಂದು ಅವರು ಹೇಳಿದರು.

ಧ್ವನಿ : ಅಶ್ವಿನಿ ವೈಷ್ಣವ್ (೩೮ ಸೆಕೆಂಡ್‌ಗಳು)

ಈ ಯೋಜನೆಯು ಸುಮಾರು ೧೪.೮೩ ಲಕ್ಷ ಮಾನವ ದಿನಗಳ ನೇರ ಉದ್ಯೋಗ ಮತ್ತು ೧೮.೪೬ ಲಕ್ಷ ಮಾನವ ದಿನಗಳ ಪರೋಕ್ಷ ಉದ್ಯೋಗವನ್ನು ಸೃಷ್ಟಿಸುತ್ತದೆ. ಪ್ರಸ್ತಾವಿತ ಕಾರಿಡಾರ್ ಸುತ್ತಮುತ್ತಲಿನ ಆರ್ಥಿಕ ಚಟುವಟಿಕೆಯಲ್ಲಿನ ಹೆಚ್ಚಳದಿಂದಾಗಿ ಈ ಯೋಜನೆಯು ಹೆಚ್ಚುವರಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಅಶ್ವಿನಿ ವೈಷ್ಣವ್ ಹೇಳಿದರು.

<><><>

ಪ್ರಸ್ತುತ ಪ್ರತಿಕೂಲ ಪರಿಸ್ಥಿತಿಯಲ್ಲಿ ಮೂಲಭೂತ ಸೇವೆಗಳ ವಿತರಣೆಯನ್ನು ಸರಾಗಗೊಳಿಸುವ ಬಗ್ಗೆ ನೇಪಾಳ ಸರ್ಕಾರದ ಮುಖ್ಯ ಕಾರ್ಯದರ್ಶಿ ಏಕನಾರಾಯಣ್ ಆರ್ಯಲ್ ಅವರು, ಕಾರ್ಯದರ್ಶಿಗಳೊಂದಿಗೆ ಚರ್ಚಿಸುತ್ತಿದ್ದಾರೆ. ಇದೇ ವೇಳೆ, ನೇಪಾಳ ಸೇನೆಯು ಕಠ್ಮಂಡು ಕಣಿವೆಯ ಮೇಲೆ ಕಟ್ಟುನಿಟ್ಟಿನ ನಿಯಂತ್ರಣವನ್ನು ತೆಗೆದುಕೊಂಡಿದೆ. ನೇಪಾಳ ಸುಪ್ರೀಂಕೋರ್ಟ್ ಮುಂದಿನ ಸೂಚನೆ ನೀಡುವವರೆಗೆ ಪ್ರಕರಣಗಳ ವಿಚಾರಣೆಯನ್ನು ಸ್ಥಗಿತಗೊಳಿಸಿದೆ. ಪೂರ್ವ ನೇಪಾಳದ

ಝೂಪಾ ಮತ್ತು ಧಂಗಾಧಿಯಲ್ಲಿ ಭದ್ರತಾ ಪಡೆಗಳ ನಿಯೋಜನೆಯೊಂದಿಗೆ ಜನಜೀವನ ಸಹಜ ಸ್ಥಿತಿಗೆ ಮರಳುತ್ತಿದೆ.

<><><>

ನೇಪಾಳದಲ್ಲಿ ಇತ್ತೀಚೆಗೆ ನಡೆದ ಅಶಾಂತಿ ಮತ್ತು ರಾಜಕೀಯ ದಂಗೆಯಿಂದಾಗಿ, ಉತ್ತರಾಖಂಡದ ಬಳಿಯ ಭಾರತ-ನೇಪಾಳ ಗಡಿಯಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ. ಗಡಿ ಪ್ರದೇಶಗಳಲ್ಲಿ, ಸಶಸ್ತ್ರ ಗಡಿ ಭದ್ರತಾ ಪಡೆ-ಎಸ್ಎಸ್‌ಬಿ ಮತ್ತು ಪೊಲೀಸರು ಜಂಟಿಯಾಗಿ ತೀವ್ರ ತಪಾಸಣೆ, ಗಸ್ತು ಮತ್ತು ಕೂಂಬಿಂಗ್ ಕಾರ್ಯಾಚರಣೆಗಳನ್ನು ನಡೆಸುತ್ತಿದ್ದಾರೆ. ಅಂತಾರಾಷ್ಟ್ರೀಯ ಗಡಿಯಲ್ಲಿ ಪೊಲೀಸರು ಮತ್ತು ಎಸ್ಎಸ್‌ಬಿ ಕಣ್ಗಾವಲು ಬಿಗಿಗೊಳಿಸಿದ್ದಾರೆ ಎಂದು ಚಂಪಾವತ್ ಜಿಲ್ಲಾಧಿಕಾರಿ ಮನೀಶ್ ಕುಮಾರ್ ಹೇಳಿದ್ದಾರೆ. ಯಾವುದೇ ಅನುಮಾನಾಸ್ಪದ ಚಟುವಟಿಕೆಯ ಮೇಲೆ ನಿಕಟ ನಿಗಾ ಇಡಲಾಗುತ್ತಿದೆ. ಜಿಲ್ಲಾಡಳಿತವು ಪರಿಸ್ಥಿತಿಯನ್ನು ನಿಕಟವಾಗಿ ಮೇಲ್ವಿಚಾರಣೆ ಮಾಡುತ್ತಿದೆ ಎಂದು ಅವರು ಹೇಳಿದರು.

<><><>

ವಿಧಾನಸೌಧದ ಮುಂಭಾಗದಲ್ಲಿ ನಾಳೆ ನಡೆಯಲಿರುವ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನವನ್ನು ಲೋಕಸಭಾಧ್ಯಕ್ಷ ಓಂ ಬಿರ್ಲಾ ಉದ್ಘಾಟಿಸಲಿದ್ದಾರೆ. ಜನರ ವಿಶ್ವಾಸಗಳಿಸಿ ಅವರ ಆಕಾಂಕ್ಷೆಗಳನ್ನು ಪೂರೈಸುವಲ್ಲಿ ಸದನಗಳ ಚರ್ಚೆ, ಸಂವಾದಗಳ ಪಾತ್ರ ಈ ಸಮ್ಮೇಳನದ ಕಾರ್ಯಸೂಚಿ ವಿಷಯವಾಗಿದೆ. ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆ ಉಪಸಭಾಪತಿ ಹರಿವಂಶ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಸಭಾಧ್ಯಕ್ಷರು, ವಿದೇಶಿ ಸಂಸತ್ತುಗಳ ಸದಸ್ಯರು ಸಮ್ಮೇಳನದಲ್ಲಿ ಭಾಗವಹಿಸಲಿದ್ದು, ಮೂರು ದಿನಗಳ ಈ ಕಾರ್ಯಕ್ರಮದಲ್ಲಿ ಲೋಕಸಭಾಧ್ಯಕ್ಷರು ಸ್ಮರಣಿಕೆಯನ್ನು ಬಿಡುಗಡೆ ಮಾಡಲಿದ್ದಾರೆ.

<><><>

ರಷ್ಯಾದಿಂದ ತೈಲ ಖರೀದಿಸುವ ಎರಡು ದೊಡ್ಡ ರಾಷ್ಟ್ರಗಳಾದ ಭಾರತ ಮತ್ತು ಚೀನಾದ ಮೇಲೆ ಶೇಕಡ ೧೦೦ ರಷ್ಟು ಹೆಚ್ಚಿನ ಸುಂಕಗಳನ್ನು ವಿಧಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯುರೋಪಿಯನ್ ಒಕ್ಕೂಟವನ್ನು ಕೇಳಿಕೊಂಡಿದ್ದಾರೆ. ಅಮೆರಿಕ ಈಗಾಗಲೇ ಶೇಕಡ ೫೦ ರಷ್ಟು ಸುಂಕಗಳನ್ನು ವಿಧಿಸಿತ್ತು ಮತ್ತು ಈಗ ಉಕ್ರೇನ್‌ನಲ್ಲಿ ಮಾಸ್ಕೋದ ಯುದ್ಧವನ್ನು ಕೊನೆಗೊಳಿಸಲು ಒತ್ತಡವನ್ನು ಹೆಚ್ಚಿಸುವ ಸಾಮೂಹಿಕ ಪ್ರಯತ್ನದ ಭಾಗವಾಗಿ ಭಾರತದ ಮೇಲೆ ವ್ಯಾಪಕ ಸುಂಕಗಳನ್ನು ವಿಧಿಸುವಂತೆ ಯುರೋಪಿಯನ್ ಒಕ್ಕೂಟವನ್ನು ಕೇಳಿದೆ.

<><><>

ಜಿಎಸ್‌ಟಿ ದರಗಳಲ್ಲಿನ ಇತ್ತೀಚಿನ ಬದಲಾವಣೆಯ ನಂತರ, ಪೂರ್ವ-ಪ್ಯಾಕೇಜ್ ಮಾಡಿದ ಸರಕುಗಳ ತಯಾರಕರು, ಪ್ಯಾಕರ್‌ಗಳು ಮತ್ತು ಆಮದುದಾರರು ಡಿಸೆಂಬರ್ ೩೧ ರವರೆಗೆ ಮಾರಾಟವಾಗದ ದಾಸ್ತಾನುಗಳ ಮೇಲೆ ಪರಿಷ್ಕೃತ ಗರಿಷ್ಠ ಚಿಲ್ಲರೆ ಬೆಲೆ ಅಥವಾ ಮುಖಬೆಲೆಯನ್ನು ಘೋಷಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ.

<><><>

ಫ್ರಾನ್ಸ್‌ನಲ್ಲಿ ಇಂದು ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಮತ್ತು ಅವರ ಸರ್ಕಾರದ ವಿರುದ್ಧ ದೇಶಾದ್ಯಂತ ಪ್ರತಿಭಟನೆಗಳು ನಡೆದಿವೆ. ಸೆಬಾಸ್ಟಿಯನ್ ಲೆಕೋರ್ನು ಅವರನ್ನು ಪ್ರಧಾನಿ ಮಂತ್ರಿಯಾಗಿ ನಿನ್ನೆ ನೇಮಕ ಮಾಡಿದ ನಂತರ ಪ್ರತಿಭಟನೆಗಳು ಪ್ರಾರಂಭವಾದವು. "ಎಲ್ಲವನ್ನೂ ನಿರ್ಬಂಧಿಸಿ" ಚಳುವಳಿಯ ಬ್ಯಾನರ್ ಅಡಿಯಲ್ಲಿ ಸಾವಿರಾರು ಜನರು ಬೀದಿಗಳಿಗೆ ನುಗ್ಗಿ, ಗಲಭೆಯ ಸಂದರ್ಭದಲ್ಲಿ ೨೦೦ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ ಎಂದು ಅಧಿಕಾರಿಗಳು ದೃಢಪಡಿಸಿದರು.

<><><>

ನವದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನ ಸಂಸ್ಥೆಯು ವಿದ್ಯಾರ್ಥಿಗಳ ಆತ್ಮಹತ್ಯೆಗಳನ್ನು ನಿಭಾಯಿಸಲು ಮತ್ತು ಮಾನಸಿಕ ಆರೋಗ್ಯ ಜಾಗೃತಿಯನ್ನು ಸುಧಾರಿಸಲು "ನೆವರ್ ಅಲೋನ್" ಎಂಬ ಕೃತಕಬುದ್ಧಿಮತ್ತೆ ಆಧಾರಿತ ಮಾನಸಿಕ ಆರೋಗ್ಯ ಮತ್ತು ಕ್ಷೇಮ ಕಾರ್ಯಕ್ರಮವನ್ನು ಇಂದು ಪ್ರಾರಂಭಿಸಿದೆ.

<><><>

ಪಿಂಚಣಿ ಕುಂದುಕೊರತೆಗಳನ್ನು ನಿರ್ವಹಿಸುವಾಗ ಹೆಚ್ಚು ನಾಗರಿಕ ಕೇಂದ್ರಿತ ವಿಧಾನವನ್ನು ಅನುಸರಿಸಬೇಕೆಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಸಚಿವ ಡಾ. ಜಿತೇಂದ್ರಸಿಂಗ್ ಕರೆ ನೀಡಿದ್ದಾರೆ.

<><><>

ಮಳೆಗಾಲದಲ್ಲಿ ಸಂಭವಿಸಿದ ನೈಸರ್ಗಿಕ ವಿಕೋಪಗಳಿಂದ ಉಂಟಾದ ಹಾನಿಯನ್ನು ನಿರ್ಣಯಿಸಲು ಕೇಂದ್ರ ಸರ್ಕಾರದ ಅಂತರ ಸಚಿವಾಲಯ ತಂಡಗಳು ಹಿಮಾಚಲ ಪ್ರದೇಶದ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿವೆ.

<><><>

ಬುಡಕಟ್ಟು ವ್ಯವಹಾರಗಳ ರಾಜ್ಯ ಸಚಿವ ದುರ್ಗಾದಾಸ್ ಉಯಿಕಿ ಇಂದು ನವದೆಹಲಿಯ ಭಾರತ್ ಮಂಟಪದಲ್ಲಿ ವಿಶ್ವದ ಮೊದಲ ಡಿಜಿಟಲ್ ಬುಡಕಟ್ಟು ವಿಶ್ವವಿದ್ಯಾಲಯ - ಆದಿ ಸಂಸ್ಕೃತಿಯನ್ನು ಉದ್ಘಾಟಿಸಿದರು.

<><><>

ಪಂಜಾಬ್ ಪೊಲೀಸರು ಗಡಿಯಾಚೆಗಿನ ಮಾದಕವಸ್ತು ಕಳ್ಳಸಾಗಣೆ ಜಾಲವನ್ನು ಭೇದಿಸಿದ್ದಾರೆ, ಇದರಲ್ಲಿ ತಂದೆ-ಮಗನ ಜೋಡಿಯೂ ಸೇರಿದ್ದಾರೆ, ಅವರ ನಾಲ್ವರು ಸದಸ್ಯರನ್ನು ಬಂಧಿಸಿ, ಅವರ ಬಳಿಯಿದ್ದ ಅತ್ಯಾಧುನಿಕ ಪಿಸ್ತೂಲ್ ಜೊತೆಗೆ ೧೨ ಕಿಲೋಗ್ರಾಂಗಳಿಗೂ ಹೆಚ್ಚು ಹೆರಾಯಿನ್ ಅನ್ನು ವಶಪಡಿಸಿಕೊಂಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>